# ಕರ್ನಾಟಕ ವಿಧಾನಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : **1034** |
| ಸದಸ್ಯರ ಹೆಸರು | : ಶ್ರೀಮತಿ ಉಮಾಶ್ರೀ<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : 25.07.2024 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಫಿಲಂ ಸಿಟಿ ಯೋಜನೆ ಹಲವಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದು, ಈ ಕುರಿತು ಇದುವರೆಗೂ ಆಗಿರುವ ಪ್ರಗತಿ ಏನು; | ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕಿನ ಹಿಮ್ಮಾವು ಗ್ರಾಮದಲ್ಲಿ 110.08 ಎಕರೆ ಜಮೀನನ್ನು ಜಾಗತಿಕ ಮಟ್ಟದ ಚಲನಚಿತ್ರ ನಗರಿ ನಿರ್ಮಾಣಕ್ಕಾಗಿ ಕಂದಾಯ ಇಲಾಖೆಯಿಂದ ಲೀಸ್ ಆಧಾರದ ಮೇಲೆ ಮಂಜೂರು ಮಾಡಲಾಗಿದ್ದು, ಈ ಜಮೀನನ್ನು ಯಾವುದೇ ಶುಲ್ಕವಿಲ್ಲದೆ ಉಚಿತವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೆಸರಿಗೆ ವರ್ಗಾಯಿಸುವಂತೆ ಕಂದಾಯ ಇಲಾಖೆಯನ್ನು ಕೋರಲಾಗಿದೆ. ಈ ಪ್ರಕ್ರಿಯೆ ಚಾಲನೆಯಲ್ಲಿದೆ. |
| (ಆ) | ಈ ಫಿಲಂ ಸಿಟಿ ಯಾವ ಸ್ಥಳದಲ್ಲಿ ರೂಪುಗೊಳ್ಳಲಿದೆ; ಹಾಗೂ ಇಲಾಖೆಯಿಂದ ಇದಕ್ಕಾಗಿ ಎಷ್ಟು ಹಣವನ್ನು ಮೀಸಲಿರಿಸಿದೆ? | ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕಿನ ಹಿಮ್ಮಾವು ಗ್ರಾಮದಲ್ಲಿ ಫಿಲಂ ಸಿಟಿಯು ಪಿ.ಪಿ.ಪಿ. ಮಾದರಿಯಲ್ಲಿ ನಿರ್ಮಾಣಗೊಳ್ಳಲಿದೆ.<br><br>ಈ ಉದ್ದೇಶಕ್ಕೆ ನೀಡಲಾಗಿರುವ ಜಮೀನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ಹಸ್ತಾಂತರಗೊಂಡ ನಂತರ ಈ ಬಗ್ಗೆ ಮುಂದಿನ ಪ್ರಕ್ರಿಯೆ ಕೈಗೊಳ್ಳಲಾಗುವುದು. |

**ಸಂಖ್ಯೆ: ಕೆಸಿಐ/194/ಪಿಐಪಿ/2024**

(ಸಿದ್ದರಾಮಯ್ಯ)

**ಮುಖ್ಯಮಂತ್ರಿ**